(ಸದನವು ಸಂಜೆ 6 ಗಂಟೆ 34 ನಿಮಿಷಕ್ಕೆ ಮುಂದುಡಲ್ಪಟ್ಟು ಮುಕ್ತಾಯಗೊಂಡು ಪುನಃ ದಿನಾಂಕ:13-03-2003ನೇ ಗುರುವಾರದಂದು ಬೆಳಿಗ್ಗೆ 11-00 ಗಂಟೆಗೆ ಸೇರಲು ನಿಶ್ಚಯಿಸಿತು).

7. ಅನುಬಂಧ I

ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಂಥಾಲಯಗಳ ಸ್ಥಾಪನೆ

909 (1169) ಶ್ರೀ ಅಪ್ಪಚ್ಚು ರಂಜನ್ ಎಂಪಿ (ಸೋಮವಾರ ಪೇಟೆ): ಮಾನ್ಯ ವಯಸ್ಕರ ಶಿಕ್ಷಣ ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ಹಿಂದೆ ಸರ್ಕಾರ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಎಷ್ಟು ಗ್ರಂಥಾಲಯಗಳನ್ನು ತೆರೆಯುವುದಾಗಿ ಘೋಷಣೆ ಮಾಡಲಾಗಿತ್ತು?

ಆ) ಎಷ್ಟು ಗ್ರಂಥಾಲಯಗಳನ್ನು ತೆರೆಯಲಾಗಿದೆ: ತೆರೆಯಲು ಎಷ್ಟು ಬಾಕಿ ಇದೆ?

ಇ) ಉಳಿದ, ಗ್ರಂಥಾಲಯಗಳನ್ನು ತೆರೆಯಲು ಯಾವ ಕ್ರಮ ಕೈಗೊಳ್ಳಲಾಗಿದೆ.

ಈ) ಗ್ರಂಥಾಲಯ ಮೇಲ್ವಿಚಾರಕರ ಸೇವೆಯನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಶ್ರೀ ಬಾಬುರಾವ್ ಚವ್ಹಾಣ್ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು) :

ಅ) ಹಣಕಾಸಿನ ಲಭ್ಯತೆ ಮೇರೆಗೆ ಹಂತ ಹಂತವಾಗಿ ರಾಜ್ಯದಲ್ಲಿನ ಎಲ್ಲಾ ಗ್ರಾಮ ಪಂಚಾಯ್ತಿಗಳಲ್ಲಿ ಗ್ರಂಥಾಲಯಗಳನ್ನು ತೆರೆಯುವುದಾಗಿ ತಿಳಿಸಿದೆ.

ಆ) 3251 ಗ್ರಾಮ ಪಂಚಾಯಿತಿ ಗ್ರಂಥಾಲಯಗಳು ಮಂಜೂರಾಗಿವೆ. ಇನ್ನು 2404 ತೆರೆಯಲು ಬಾಕಿ ಇದೆ.

ಇ) ಹಣಕಾಸಿನ ಲಭ್ಯತೆ ಮೇರೆಗೆ ಹಂತ ಹಂತವಾಗಿ ಗ್ರಂಥಾಲಯಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದು.

ಈ) ಇಲ್ಲ

ಸೋಮವಾರ ಪೇಟೆ ತಾಲ್ಲೂಕಿನಲ್ಲಿ ಶಿಕ್ಷಣ ಸಂಯೋಜಕರಾಗಿ ನಿಯೋಜನೆಗೊಂಡಿರುವ ಅಧಿಕಾರಿ ಕರ್ತವ್ಯಕ್ಕೆ ಹಾಜರಾಗದಿರುವುದು

910 (1258) ಶ್ರೀ ಅಪ್ಪಚ್ಚು ರಂಜನ್ (ಸೋಮವಾರ ಪೇಟೆ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೋಮವಾರಪೇಟೆ ತಾಲ್ಲೂಕಿನ ಶಿಕ್ಷಣ ಸಂಯೋಜಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ಕೆ.ಕೆ. ಮಂಜುನಾಥರವರನ್ನು ಕಿರಂಗಂದೂರು ಪ್ರೌಢ ಶಾಲೆಗೆ ನಿಯೋಜಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ನಿಯೋಜಿತ ಸ್ಥಳಕ್ಕೆ ಇನ್ನು ಕರ್ತವ್ಯದ ಮೇಲೆ ಹಾಜರಾಗದಿಲ್ಲದಿರುವುದು ನಿಜವೇ? - ಹಾಜರಾಗಿಲ್ಲದಿರುವುದಕ್ಕೆ ಯಾವ ಕ್ರಮ ಕೈಗೊಂಡಿದ್ದೀರಿ.